ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

# ಪಟ್ಟಿ – ೬

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನಾಲ್ಕನೇ ಅಧಿವೇಶನ**

**ಮಂಗಳವಾರ, ದಿನಾಂಕ: ೨೦ನೇ ಫೆಬ್ರವರಿ, ೨೦೧೮**

---

**ಸಮೂಹ – II**

೧. ಇಂಧನ ಸಚಿವರು

೨. ಕೃಷಿ ಸಚಿವರು

೩. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೪. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೫. ಸಹಕಾರ ಸಚಿವರು

೬. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೭. ಜವಳಿ ಹಾಗೂ ಮುಜರಾಯಿ ಸಚಿವರು

---

## ಲೋಕೋಪಯೋಗಿ ಇಲಾಖೆಯ ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ. ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೭೬ (೪೯೭) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಕಾಮಗಾರಿ ಮುಗಿದು ಬಿಲ್ ಪಾವತಿಗೆ ಬಾಕಿಯಿರುವ ಪ್ರಕರಣಗಳಿವೆಯೇ ;

(ಆ) ಇದ್ದಲ್ಲಿ, ಎಷ್ಟು ವರ್ಷಗಳಿಂದ ಪಾವತಿಗೆ ಬಾಕಿಯಿರುತ್ತದೆ ; ಪಾವತಿಗೆ ಬಾಕಿಯಿರುವ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಕಾಮಗಾರಿ ಮುಗಿದು, ಬಿಲ್ ಪಾವತಿಗೆ ಬಾಕಿಯಿರುವ ಮೊತ್ತವೆಷ್ಟು ; ಆ ಕಾಮಗಾರಿಗಳು ಯಾವುವು ;

(ಈ) ಸದರಿ ಕಾಮಗಾರಿಗಳ ಮೊತ್ತವನ್ನು ಪಾವತಿಸಲು ಅನುದಾನ ಬಿಡುಗಡೆ ಮಾಡಲು ಇರುವ ತೊಡಕುಗಳೇನು ?

## ನಂದಿ ಇನ್‌ಫ್ರಾಸ್ಟ್ರಕ್ಚರ್ ಕಂಪನಿಯಿಂದ ರಸ್ತೆ ನಿರ್ಮಾಣದ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು)–**

೭೭ (೫೦೩) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೧೯೯೭ರ ಫ್ರೇಮ್‌ವರ್ಕ್ ಒಪ್ಪಂದದ ಪ್ರಕಾರ, ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್ ಪ್ರೈಸಸ್‌ಗೆ ವಹಿಸಿದ್ದ ಕಾರ್ಯವೇನು ; ಅದರಂತೆ ಅವರು ಎಷ್ಟು ಕಿ.ಮೀ. ರಸ್ತೆ ಹಾಗೂ ಎಷ್ಟು ಟೌನ್‌ಶಿಪ್ ನಿರ್ಮಾಣ ಮಾಡಬೇಕಾಗಿತ್ತು ;

(ಆ) ರಸ್ತೆ ಮತ್ತು ಟೌನ್‌ಶಿಪ್ ನಿರ್ವಹಣೆಗೆ ಪ್ರಾರಂಭದಲ್ಲಿ ನಿಗದಿಪಡಿಸಿದ್ದ ಒಟ್ಟು ಜಮೀನು ಎಷ್ಟು ; ಜಮೀನನ್ನು ಯಾವ ಯಾವ ಗ್ರಾಮಗಳಿಗೆ ಹೊಂದಿಕೊಂಡಂತೆ ನಿಗದಿ ಮಾಡಲಾಗಿತ್ತು ; (ಗ್ರಾಮವಾರು ವಿವರ ನೀಡುವುದು)

(ಇ) ಇದುವರೆಗೆ ನೈಸ್ ಸಂಸ್ಥೆಗೆ ನೀಡಲಾದ ಜಮೀನಿನ ವಿಸ್ತೀರ್ಣವೆಷ್ಟು ; ಆ ಪೈಕಿ ಸರ್ಕಾರದ ಜಮೀನಿನ ವಿಸ್ತೀರ್ಣವೆಷ್ಟು ; ರೈತರಿಗೆ ಸೇರಿದ ಜಮೀನಿನ ವಿಸ್ತೀರ್ಣವೆಷ್ಟು ; (ಗ್ರಾಮವಾರು ವಿವರ ನೀಡುವುದು)

(ಈ) ರೈತರಿಂದ ಪಡೆದ ಜಮೀನಿಗೆ ನೈಸ್ ಸಂಸ್ಥೆಯು ಎಷ್ಟು ಪರಿಹಾರವನ್ನು ನೀಡಿದೆ ; (ವಿವರ ನೀಡುವುದು)

(ಉ) ಇದುವರೆಗೆ ನೈಸ್ ಕಂಪನಿಯು ಎಷ್ಟು ಕಿ.ಮೀ. ಉದ್ದದ ರಸ್ತೆಯನ್ನು ನಿರ್ಮಿಸಿದೆ ; ಅದಕ್ಕೆ ಎಷ್ಟು ಹಣವನ್ನು ವ್ಯಯಿಸಿದೆ ;

(ಊ) ನೈಸ್ ರಸ್ತೆಯಲ್ಲಿ ಓಡಾಡುವ ವಾಹನಗಳಿಗೆ ಎಷ್ಟೆಷ್ಟು ಶುಲ್ಕವನ್ನು ಸಂಗ್ರಹಿಸಲಾಗಿರುತ್ತದೆ ; (ವಾಹನವಾರು ವಿವರಗಳನ್ನು ನೀಡುವುದು)

(ಋ) ಸಂಗ್ರಹಿಸಲ್ಪಟ್ಟ ಶುಲ್ಕದಲ್ಲಿ ಸಂಸ್ಥೆಯು ಸರ್ಕಾರಕ್ಕೆ ಪಾವತಿಸುತ್ತಿರುವ ಪಾಲಿನ ಮೊಬಲಗು ಎಷ್ಟು ; ಅದನ್ನು ಯಾವ ಮಾನದಂಡದಲ್ಲಿ ನಿಗದಿಪಡಿಸಲಾಗಿದೆ ? (ವಿವರ ನೀಡುವುದು)

## ತೆಂಗು ಬೆಳೆಗಾರರನ್ನು ಸಬಲರನ್ನಾಗಿಸುವ ಉದ್ದೇಶದಿಂದ ಮಾಡಲಾಗಿರುವ ರಾಜ್ಯ ನೀರಾ ನೀತಿ ಅನುಷ್ಠಾನ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)–**

೭೮ (೭೫೨) ಕೃಷಿ ಮಾರುಕಟ್ಟೆ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಂಕಷ್ಟಕ್ಕೆ ಸಿಲುಕಿರುವ ತೆಂಗು ಬೆಳೆಗಾರರನ್ನು ಸಬಲರನ್ನಾಗಿಸುವ ಉದ್ದೇಶದಿಂದ ''ರಾಜ್ಯ ನೀರಾ ನೀತಿ ರೂಪಿಸಿದ್ದು ನಿಜವೇ ; ನಿಜವಾಗಿದ್ದಲ್ಲಿ, ಯಾವಾಗ ರೂಪಿಸಲಾಯಿತು ;

(ಆ) ರಾಜ್ಯ ನೀರಾ ನೀತಿಯಿಂದ ಆಗುವ ಅನುಕೂಲಗಳೇನು ; ತೆಂಗು ಬೆಳೆಗಾರರಿಗೆ ಇದರ ಅನುಷ್ಠಾನದಿಂದ ಯಾವ ಪ್ರಮಾಣದ ಆರ್ಥಿಕ ಸಬಲತೆ ನೀಡಬಹುದು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಟೋಲ್‌ಗಳ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)–**

೭೯(೭೪೫) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಇರುವ ಹೆದ್ದಾರಿ ಟೋಲ್‌ಗಳ ಸಂಖ್ಯೆ ಎಷ್ಟು ; ಅವು ಯಾವುವು ; ಅವುಗಳನ್ನು ಯಾವ ಸಂಸ್ಥೆಯವರು ನಿರ್ವಹಿಸುತ್ತಿದ್ದಾರೆ ;

(ಆ) ಇವರು ಮಾಡಿಕೊಂಡಿರುವ ಒಪ್ಪಂದಗಳು B.O.O.T OR B.O.O. OR ಇತರೆ ವಿವರ ನೀಡುವುದು ;

(ಇ) ಆ್ಯಂಬ್ಯುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸದಿರುವುದು ನಿಜವೇ ;

(ಈ) ಈ ಸಂಬಂಧ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ?

## ಗ್ರಾಮ ಪಂಚಾಯತ್‌ಗಳ ವಿದ್ಯುತ್ ದರವನ್ನು ಕಡಿಮೆಗೊಳಿಸಿ, ಬಡ್ಡಿ ತೆಗೆದು ಹಾಕುವ ಕುರಿತು.

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೮೦ (೬೦೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ, ಗ್ರಾಮ ಪಂಚಾಯತ್‌ಗಳು ಎಸ್ಕಾಂಗಳಿಗೆ ಪಾವತಿಸಲು ಬಾಕಿಯಿರುವ ವಿದ್ಯುತ್ ಬಿಲ್ಲಿನ ಮೊತ್ತವನ್ನು ಸರ್ಕಾರ ಪಾವತಿ ಮಾಡಿದೆಯೇ ;

(ಆ) ಈ ಕುರಿತು ಆದೇಶ ಹೊರಡಿಸಲಾಗಿದೆಯೇ ; ಒಟ್ಟು ಎಷ್ಟು ವಿದ್ಯುತ್ ಬಿಲ್ಲುಗಳನ್ನು ಯಾವ ದಿನಾಂಕದವರೆಗೆ ಒಟ್ಟು ಎಷ್ಟು ಬಾಕಿ ಪಾವತಿಸಲಾಗಿದೆ ; (ಮಾಹಿತಿ ಒದಗಿಸುವುದು)

(ಇ) ಗ್ರಾಮ ಪಂಚಾಯತ್‌ಗಳ ಬಾಕಿ ವಿದ್ಯುತ್ ಬಿಲ್ಲಿನ ಮೊತ್ತ ಎಷ್ಟು; ಆದೇಶ ಜಾರಿಗೊಂಡ ನಂತರ, ಇಲ್ಲಿಯವರೆಗಿನ ಗ್ರಾಮ ಪಂಚಾಯತ್‌ಗಳಿಂದ ಎಸ್ಕಾಂಗಳಿಗೆ ಪಾವತಿಸಬೇಕಾದ ಒಟ್ಟು ಮೊತ್ತ, ಪಾವತಿಸಿದ ಮೊತ್ತ ಮತ್ತು ಪ್ರಸಕ್ತ ಬಾಕಿ ಇರುವ ವಿದ್ಯುತ್ ಬಿಲ್ಲಿನ ಮೊತ್ತವೆಷ್ಟು ; (ಜಿಲ್ಲಾ, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಎಸ್ಕಾಂಗಳು, ಗ್ರಾಮ ಪಂಚಾಯತ್‌ಗಳಿಗೆ ನಿಯಮಿತವಾಗಿ ಪ್ರತಿ ತಿಂಗಳು, ಬಿಲ್ಲಿನ ಮೊತ್ತ–ಬಳಸಿದ ಯುನಿಟ್–ಮೀಟರ್ ನಂಬರ್ ಮಾಹಿತಿಯನ್ನೊಳಗೊಂಡ ಬಿಲ್ಲನ್ನು ಸಲ್ಲಿಸಲು ಕ್ರಮ ಕೈಗೊಳ್ಳಲಾಗುವುದೇ ; (ವಿವರ ನೀಡುವುದು)

(ಉ) ಗ್ರಾಮ ಪಂಚಾಯತ್ ಸಾರ್ವಜನಿಕ ಬೀದಿ ದೀಪ ಮತ್ತು ಕುಡಿಯುವ ನೀರಿನ ಸ್ಥಾವರಗಳಿಗೆ ಎಸ್ಕಾಂಗಳು ವಿಧಿಸುತ್ತಿರುವ ವಿದ್ಯುತ್ ಬಿಲ್ಲಿನ ಯುನಿಟ್ ದರ ಎಷ್ಟು ; ವಿಧಿಸುತ್ತಿರುವ ಬಡ್ಡಿಯ ದರ ಎಷ್ಟು : ಬಡ್ಡಿಗೆ ಪುನಃ ಪುನಃ ಬಡ್ಡಿ ವಿಧಿಸುತ್ತಿರುವುದು ನಿಜವೇ ;

(ಊ) ಸ್ಥಳೀಯ ಸರ್ಕಾರವಾಗಿ ಪರಿಗಣಿಸುವ ಗ್ರಾಮ ಪಂಚಾಯತ್‌ಗಳ ಸಾರ್ವಜನಿಕ ಬೀದಿ ದೀಪ ಮತ್ತು ಕುಡಿಯುವ ನೀರಿನ ಸ್ಥಾವರಗಳಿಗೆ ರಿಯಾಯಿತಿ ದರದ ಶುಲ್ಕ ವಿಧಿಸುವುದು ಮತ್ತು ಬಾಕಿ ಮೊತ್ತಕ್ಕೆ ಬಡ್ಡಿ ವಿಧಿಸುವುದನ್ನು ತಡೆಯುವ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಬೀದರ್ ಜಿಲ್ಲೆಯಲ್ಲಿ ಜೋಲಾಡುತ್ತಿರುವ ವಿದ್ಯುತ್ ತಂತಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೮೧ (೭೭೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ವಿದ್ಯುತ್ ತಂತಿಗಳು ಜೋಲಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ದೀನದಯಾಳು ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆ ಪ್ರತಿ ಜಿಲ್ಲೆಗೆ ನೀಡಿದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿ ಕೊಡಲಾಗಿದೆ ; ಇನ್ನೂ ಎಷ್ಟು ಜನರಿಗೆ ವಿದ್ಯುತ್ ಸಂಪರ್ಕ ನೀಡಬೇಕಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

---

**ಮಹಿಳಾ ಉದ್ಯೋಗಿಗಳಿಗೆ ಶಿಶುಪಾಲನಾ ರಜೆ ಸೌಲಭ್ಯದ ಬಗ್ಗೆ**

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ)–**

೮೨ (೭೭೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇಲಾಖೆಯ ವಿವಿಧ ನಿಗಮ/ಕಂಪನಿಗಳಲ್ಲಿ ಮಹಿಳಾ ಉದ್ಯೋಗಿಗಳು ಸೇವೆ ಸಲ್ಲಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ ; ಇದ್ದರೆ, ನಿಗಮ/ಕಂಪನಿವಾರು, ಮಹಿಳಾ ಉದ್ಯೋಗಿಗಳ ಸಂಖ್ಯೆ ಮಾಹಿತಿ ನೀಡುವುದು ;

(ಆ) ಇಂಧನ ಇಲಾಖೆಯಲ್ಲಿ ಮಹಿಳಾ ಉದ್ಯೋಗಿಗಳಿಗೆ ಶಿಶುಪಾಲನಾ ರಜಾ (Child care leave) ಸೌಲಭ್ಯ ನೀಡಲಾಗಿದೆಯೇ ; ಇದ್ದರೆ, ನಿಗಮ/ಕಂಪನಿವಾರು ಮಾಹಿತಿ ನೀಡುವುದು)

(ಇ) ಇಂಧನ ಇಲಾಖೆಯಡಿಯಲ್ಲಿ ಬರುವ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ (KPTCL)ದ ಅಡಿಯಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳಾ ಸಿಬ್ಬಂದಿಗಳಿಗೆ ಶಿಶುಪಾಲನಾ ರಜೆ ಸೌಲಭ್ಯ ನೀಡುತ್ತಿದ್ದು, ಕರ್ನಾಟಕ ವಿದ್ಯುತ್ ನಿಗಮ (KPCL)ಅಡಿಯಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳಾ ಸಿಬ್ಬಂದಿಗಳು ಈ ಸೌಲಭ್ಯದಿಂದ ವಂಚಿತವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)

(ಈ) ಮೇಲ್ಕಾಣಿಸಿದ ತಾರತಮ್ಯ ನಿವಾರಣೆ ಮಾಡಿ, ಕರ್ನಾಟಕ ವಿದ್ಯುತ್ ನಿಗಮದ ಅಡಿಯಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳಾ ಸಿಬ್ಬಂದಿಗಳಿಗೆ ಶಿಶುಪಾಲನಾ ರಜೆ (Child care Leave) ಸೌಲಭ್ಯ ನೀಡಲು ಸರ್ಕಾರ ಮುಂದಾಗುವುದೇ ; ಇದ್ದರೆ, ಸರ್ಕಾರದ ಮುಂದಿರುವ ಕ್ರಮಗಳೇನು ?

**ಬೆಳಗಾವಿ ದಕ್ಷಿಣ ಮತ ಕ್ಷೇತ್ರದ ವಿದ್ಯುತ್ ಸಂಪರ್ಕದ ಬಗ್ಗೆ**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)–**

೮೩ (೭೫೧) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಸಿರನವಾಡಿ ಗ್ರಾಮ ಪಂಚಾಯ್ತಿ ವಿನಾಯಕನಗರ ಹಾಗೂ ಮುಸ್ಲಿಂ ಕಾಲೋನಿಗೆ ವಿದ್ಯುಚ್ಛಕ್ತಿ ಸಂಪರ್ಕ ನೀಡಲು ಮನವಿ ಸಲ್ಲಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈಗಾಗಲೇ ಸರ್ವೆ ಮಾಡಲಾಗಿದೆಯೇ ;

(ಇ) ಜನರ ಮನವಿಗೆ ಸ್ಪಂದಿಸಿ, ಕೂಡಲೇ ಸಂಪರ್ಕ ಹಾಗೂ ಟಿ.ಸಿ. ಹಾಕಲಾಗುವುದೇ ;

(ಈ) ಈ ತಿಂಗಳೊಳಗೆ ಕಾಮಗಾರಿ ಮಾಡಿ ಮುಗಿಸಿ ಜನರಿಗೆ ಅನುಕೂಲ ಮಾಡಿಕೊಡಲಾಗುವುದೇ ?

## ರಾಜ್ಯದ ಹೆದ್ದಾರಿಗಳ ದುರಸ್ಥಿ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)–**

೮೪ (೬೧೮) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಹೆದ್ದಾರಿಗಳಲ್ಲಿ ಇದುವರೆವಿಗೂ ಎಷ್ಟು ಹೆದ್ದಾರಿಗಳು ದುರಸ್ತಿಗೊಂಡಿವೆ ;

(ಆ) ರಾಜ್ಯದ ಎಷ್ಟು ರಸ್ತೆಗಳು ಹೆದ್ದಾರಿಗಳಾಗಿ ಮಾರ್ಪಟ್ಟಿವೆ ;

(ಇ) ರಾಜ್ಯ ಹೆದ್ದಾರಿ ರಸ್ತೆಗಳ ದುರಸ್ತಿಗೆ ಕೇಂದ್ರದಿಂದ ಇದುವರೆಗೆ ಬಂದ ಅನುದಾನ ಎಷ್ಟು ; ಖರ್ಚಾದ ಅನುದಾನ ಎಷ್ಟು ;

(ಈ) ಈಗಾಗಲೇ ಕೇಂದ್ರ ಸರ್ಕಾರ ಅನುದಾನವನ್ನು ಹೆಚ್ಚಿಸಿದ್ದು ರಾಜ್ಯದ ಎಷ್ಟು ರಸ್ತೆಗಳಿಗೆ ಈ ಭಾಗ್ಯ ದೊರೆಯಲಿದೆ ?

## ವಸತಿ ಸಮುಚ್ಛಯಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೮೫ (೪೮೨) ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿವಿಧ ರಾಜ್ಯಗಳಲ್ಲಿರುವ ಪ್ರತಿಷ್ಠಿತ ದೇವಸ್ಥಾನಗಳು ಮತ್ತು ಧಾರ್ಮಿಕ ಕೇಂದ್ರಗಳಲ್ಲಿ ಕರ್ನಾಟಕ ಸರ್ಕಾರದ ವತಿಯಿಂದ ನಿರ್ಮಿಸಿರುವ ವಸತಿ ಸಮುಚ್ಛಯಗಳು ಹಾಗೂ ಕಛೇರಿಗಳ ಸಂಖ್ಯೆ ಎಷ್ಟು; ಮತ್ತು ಯಾವ ಯಾವ ಸ್ಥಳಗಳಲ್ಲಿ ಇವೆ ;

(ಆ) ಈ ಎಲ್ಲಾ ಸ್ಥಳಗಳಲ್ಲಿ ಸಿಬ್ಬಂದಿ ವರ್ಗದವರು ಇದ್ದಾರೆಯೇ : ಇದ್ದಲ್ಲಿ, ಅದರ ಸಂಪೂರ್ಣ ವಿವರ ಕೊಡುವುದು ;

(ಇ) ಸಿಬ್ಬಂದಿ ಸಂಖ್ಯೆ ಕಡಿಮೆ ಇದ್ದಲ್ಲಿ, ಅದನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಇವುಗಳಲ್ಲಿರುವ ಸೌಲಭ್ಯಗಳ ಕೊರತೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇವುಗಳ ನಿರ್ವಹಣೆಗಾಗಿ ಸರ್ಕಾರ ಎಷ್ಟು ಹಣ ಖರ್ಚು ಮಾಡುತ್ತಿದೆ ; ಇವುಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು ?

## ರಾಜ್ಯದಲ್ಲಿ ಹಾಪ್‌ಕಾಮ್ಸ್‌ಗಳಿಗೆ ಹಣ್ಣು ಮತ್ತು ತರಕಾರಿ ಮಾರುಕಟ್ಟೆಯನ್ನು ಒದಗಿಸುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೮೬ (೭೫೪) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಹಾಪ್‌ಕಾಮ್ಸ್‌ಗಳಿಗೆ ಹಣ್ಣು ಮತ್ತು ತರಕಾರಿ ಮಾರುಕಟ್ಟೆಯನ್ನು ವ್ಯವಸ್ಥಿತವಾಗಿ ಕಲ್ಪಿಸಲು ಕೆ.ಎಂ.ಎಫ್. ಮತ್ತು ಕೆ.ಓ.ಎಫ್. ಮಾದರಿಯಲ್ಲಿ ಕರ್ನಾಟಕ ಸರ್ಕಾರದ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಕಾಯಿದೆ ೨೦೦೦ರ ೪(ಜಿ)ಗೆ ವಿನಾಯಿತಿ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ರಾಜ್ಯದಲ್ಲಿರುವ ಹಾಪ್‌ಕಾಮ್ಸ್‌ಗಳಿಗೆ ಪಾರದರ್ಶಕ ಕಾಯ್ದೆ–೨೦೦೦ರ ೪(ಜಿ) ವಿನಾಯಿತಿ ನೀಡಿದರೆ ಎಷ್ಟು ತರಕಾರಿ ಮತ್ತು ಹಣ್ಣುಗಳ ವಹಿವಾಟು ಹೆಚ್ಚಿಗೆ ಆಗುವುದು ಮತ್ತು ಈಗ ಮಾರಾಟ ಮಾಡುತ್ತಿರುವ ಹಣ್ಣು ಮತ್ತು ತರಕಾರಿ ವಹಿವಾಟುಗಳ ವಿವರ ನೀಡುವುದು ;

(ಇ) ರಾಜ್ಯದಲ್ಲಿರುವ ಹಾಪ್‌ಕಾಮ್ಸ್‌ಗಳಿಗೆ ಕರ್ನಾಟಕ ಸರ್ಕಾರದ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಕಾಯಿದೆ ೨೦೦೦ರ ೪(ಜಿ) ವಿನಾಯಿತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವ ಕಾರಣದಿಂದ ಇದುವರೆಗೆ ಕಾರ್ಯಾದೇಶ ಆಗಿರುವುದಿಲ್ಲ ; ಇಲ್ಲದಿದ್ದಲ್ಲಿ ಇದಕ್ಕೆ ಕಾರಣಗಳೇನು ಮತ್ತು ಯಾವಾಗ ಕಾರ್ಯಾದೇಶ ನೀಡಲಾಗುತ್ತದೆ ?

## ರೈತರು ತಮ್ಮ ಜಮೀನಿಗೆ ಪ್ರತ್ಯೇಕ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು)**–

೮೭ (೬೨೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ರೈತರ ಕೃಷಿಗೆ ೧೨ ಗಂಟೆಗಳ ಸತತ ವಿದ್ಯುತ್ ನೀಡಲು ಹಣ ಪಾವತಿಸಿದವರಿಗೆ ಪ್ರತ್ಯೇಕ ಟ್ರಾನ್ಸ್ ಫಾರ್ಮ್‌ರ್ ಅಳವಡಿಸುವ ಯೋಜನೆಯನ್ನು ಸರ್ಕಾರ ಯಾವಾಗ ಜಾರಿಗೆ ತರಲಾಗಿರುತ್ತದೆ ; (ಈ ಯೋಜನೆಯ ಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನ ಎಷ್ಟು ರೈತರು ಈ ಯೋಜನೆಯಡಿ ಹಣ ಪಾವತಿಸಿದ್ದರೂ, ಮೇಲ್ಕಂಡ ಯೋಜನೆಯಡಿ ಪ್ರತ್ಯೇಕ ಟ್ರಾನ್ಸ್ ಫಾರ್ಮ್‌ರ್ ಒದಗಿಸದಿರಲು ಕಾರಣವೇನು ; ಯಾವ ಯಾವ ರೈತರು ಯಾವ ಯಾವ ದಿನಾಂಕಗಳಂದು ಹಣ ಪಾವತಿಸಿ, ಪ್ರತ್ಯೇಕ ಟ್ರಾನ್ಸ್‌ಫಾರ್ಮ್‌ರ್‌ಗೆ ಕಾಯುತ್ತಿದ್ದಾರೆ ; (ಪೂರ್ಣ ವಿವರ ನೀಡುವುದು)

(ಇ) ಮೇಲ್ಕಂಡ ತಾಲ್ಲೂಕಿನ ಟೆಂಡರ್ ಪಡೆದಿರುವ ಏಶಿಯನ್ ಫ್ಯಾಬ್ರಿಕ್ ಸಂಸ್ಥೆಯವರು ಈವರೆವಿಗೂ ಮೂಲಭೂತ ಕಾಮಗಾರಿ ಮಾಡದಿರುವುದು ವಿಳಂಬಕ್ಕೆ ಕಾರಣವಾಗಿದೆಯೇ ; ಇದರಿಂದ ರೈತರಿಗಾಗುತ್ತಿರುವ ಅನಾನುಕೂಲಗಳನ್ನು ಯಾವ ರೀತಿ ಎಷ್ಟು ದಿನಗಳಲ್ಲಿ ನಿವಾರಿಸಿ ವಿದ್ಯುತ್ ಒದಗಿಸಲಾಗುವುದು ? (ಪೂರ್ಣ ವಿವರ ನೀಡುವುದು)

## ಸೋಲಾರ್ ವಿದ್ಯುತ್ ಉತ್ಪಾದನೆಗೆ ಪ್ರೋತ್ಸಾಹ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೮೮ (೭೯೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ವಿದ್ಯುತ್ ಕೊರತೆ ನೀಗಿಸಲು ಸೋಲಾರ್‌ನಿಂದ ವಿದ್ಯುತ್ ಉತ್ಪಾದನೆಗೆ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ;

(ಆ) ತುಮಕೂರು ಜಿಲ್ಲೆ, ಪಾವಗಡದಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆಗೆ ಬೃಹತ್ ಕಾರ್ಯಕ್ರಮವನ್ನು ರೂಪಿಸಿರುವಂತೆ (ಸೋಲಾರ್ ಪಾರ್ಕ್) ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಗಳಲ್ಲೂ ಕಾರ್ಯಕ್ರಮ ರೂಪಿಸಲಾಗುವುದೇ :

(ಇ) ಸೋಲಾರ್ ವಿದ್ಯುತ್ ಘಟಕಗಳನ್ನು ಅಳವಡಿಸಲು ಸರ್ಕಾರ ಯಾವ ರೀತಿ ಪ್ರೋತ್ಸಾಹ ನೀಡುತ್ತಿದೆ ?

## ರೈತ ಉತ್ಪಾದಕ ಸಂಸ್ಥೆಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೮೯ (೭೮೩) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಿಂದ ಕೃಷಿ ಇಲಾಖೆ ವತಿಯಿಂದ ರೈತ ಉತ್ಪಾದಕ ಸಂಸ್ಥೆಗಳು (Farmer Producer organization) ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳ ರೂಪುರೇಷೆಗಳೇನು ;

(ಆ) ರೈತ ಉತ್ಪಾದಕ ಸಂಸ್ಥೆಗಳು ಇಲಾಖೆಯ ಸಹಭಾಗಿತ್ವದಲ್ಲಿ ಸಂಪನ್ಮೂಲ ಕೇಂದ್ರಗಳೊಂದಿಗೆ ಕಾರ್ಯನಿರ್ವಹಿಸುತ್ತಿದ್ದು, ಈ ಸಂಸ್ಥೆಗಳ ಪಾತ್ರವೇನು ; ಈ ಸಂಸ್ಥೆಗಳಿಗೆ ೩ ವರ್ಷದಿಂದ ಬಿಡುಗಡೆಯಾದ ಅನುದಾನವೆಷ್ಟು ?

## ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಅಕ್ರಮ ನೇಮಕಾತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ )–**

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು)**

೯೦ (೭೪೭+೭೬೨) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಇತ್ತೀಚೆಗೆ ನಡೆದ ಸಹಾಯಕ ಪ್ರಾಧ್ಯಾಪಕರು ಹಾಗೂ ಸಹ ಪ್ರಾಧ್ಯಾಪಕರುಗಳ ನೇಮಕಾತಿಯಲ್ಲಿ ಪ್ರತಿಭಾನ್ವಿತ ಅಭ್ಯರ್ಥಿಗಳಿಗೆ ಅನ್ಯಾಯವಾಗಿದ್ದು, ಅಕ್ರಮ ಮತ್ತು ಭ್ರಷ್ಟಚಾರ ಹಾಗೂ ವೈಪರೀತ್ಯಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯಪಾಲರ ಆದೇಶದಂತೆ ಕೃಷಿ ವಿಶ್ವವಿದ್ಯಾಲಯದ ಕುಲಪತಿಗಳ ಅಧಿಕಾರಾವಧಿ ೬ ತಿಂಗಳು ಬಾಕಿ ಇದ್ದಾಗ, ಯಾವುದೇ ನೇಮಕಾತಿ ಹಾಗೂ ಇತರೆ ಪ್ರಮುಖ ವಿಷಯಗಳ ಬಗ್ಗೆ ತೀರ್ಮಾನ ತೆಗೆದುಕೊಳ್ಳಬಾರದೆಂಬ ನಿರ್ದೇಶನವಿದ್ದರೂ ಕುಲಪತಿಗಳು ಈ ನೇಮಕಾತಿಗಳನ್ನು ಮಾಡಿರುವುದು ಸರಿಯೇ ; ಹಾಲಿ ಇರುವ ಕುಲಪತಿಗಳ ಅಧಿಕಾರಾವಧಿ ಯಾವ ದಿನಾಂಕದಲ್ಲಿ ಮುಕ್ತಾಯಗೊಳ್ಳುತ್ತದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಹೆಚ್ಚಿನ ಅಂಕಗಳನ್ನು ಪಡೆದಿರುವ ಹಾಗೂ ಸೇವಾನುಭವ ಹೊಂದಿರುವ ಅಭ್ಯರ್ಥಿಗಳಿಗೆ ನೌಕರಿ ಸಿಗದೇ ಅನರ್ಹ ಅಭ್ಯರ್ಥಿಗಳಿಗೆ ನೌಕರಿ ದೊರೆಯುವಂತೆ ಅಕ್ರಮ/ಭ್ರಷ್ಟಾಚಾರ ಎಸಗಿರುವ ಬಗ್ಗೆ ದಾಖಲೆ ಪ್ರತಿಗಳ ಮಾಹಿತಿಯನ್ನು ಸರ್ಕಾರ ಪಡೆದಿದೆಯೇ ;

(ಈ) ನೇಮಕಾತಿಯನ್ನು ಪಾರದರ್ಶಕವಾಗಿ ನಡೆಸಿದರೆ, ಕೃಷಿ ವಿದ್ಯಾಲಯದ ನೇಮಕಾತಿ ಸಮಿತಿಯು ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ವಿದ್ಯಾರ್ಹತೆ, ಅವರು ಗಳಿಸಿದ ಅಂಕಗಳು ಹಾಗೂ ಸಮಿತಿಯಲ್ಲಿ ನೀಡಿರುವ ಅಂಕಗಳು ಹಾಗೂ ಅವರು ಆಯ್ಕೆಯಾದ ಬಗ್ಗೆ ಸಂಪೂರ್ಣ ವಿವರವಾದ ಮಾಹಿತಿಯನ್ನು ಪ್ರಕಟಿಸಿಲ್ಲವೇಕೆ ; ಈ ಮಾಹಿತಿಯನ್ನು ಯಾವಾಗ ಪ್ರಕಟಿಸಲಾಗುವುದು ;

(ಉ) ಸರ್ಕಾರದ ಆದೇಶ ಹಾಗೂ ಸೂಚನೆಗಳನ್ನು ಪಾಲಿಸದೇ, ಒಂದೇ ದಿನ ತರಾತುರಿಯಲ್ಲಿ ಆದೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸರ್ಕಾರ ಇದರ ಸಂಬಂಧ ಕ್ರಮ ಜರುಗಿಸುವುದು ? (ವಿವರವಾದ ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ.. 973 ಪ್ರತಿಗಳು 1500 – ಪಿ8